22/05/2024

ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಗುರುರಾಘವೇಂದ್ರ ಸಹಕಾರ ಬ್ಯಾಂಕ್ ನಿ., ಬೆಂಗಳೂರು ಇದರ ಆಡಳಿತಾಧಿಕಾರಿ ಅವಧಿ ವಿಸ್ತರಿಸುವ ಕುರಿತು.

**ಓದಲಾಗಿದೆ:** ಸಹಕಾರ ಸಂಘಗಳ ನಿಬಂಧಕರ ಕಛೇರಿ ಪತ್ರ ಸಂಖ್ಯೆ:ಆರ್‌ಸಿಎಸ್/ಯುಬಿಸಿ-7/29ಎ-1/ವಿಚಾರಣೆ/2019-20, ದಿನಾಂಕ:30.04.2024

***

ಪ್ರಸ್ತಾವನೆ :

ಮೇಲೆ ಓದಲಾದ ಸಹಕಾರ ಸಂಘಗಳ ನಿಬಂಧಕರ ಪತ್ರದಲ್ಲಿ, ಶ್ರೀ ಗುರು ರಾಘವೇಂದ್ರ ಸಹಕಾರ ಬ್ಯಾಂಕ್ ನಿಯಮಿತ, ಬೆಂಗಳೂರು ಈ ಬ್ಯಾಂಕಿಗೆ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 ಪ್ರಕರಣ 30(6) ರಡಿಯಲ್ಲಿ ಆಡಳಿತಾಧಿಕಾರಿಯನ್ನು ನೇಮಿಸಿದ್ದು, ಸದರಿ ಆಡಳಿತಾಧಿಕಾರಿ ಅವಧಿಯನ್ನು ದಿನಾಂಕ:27.10.2023ರ ಆದೇಶದಲ್ಲಿ ದಿನಾಂಕ:26.10.2023 ರಿಂದ 17.05.2024ರವರೆಗೆ ವಿಸ್ತರಿಸಲು ಸರ್ಕಾರವು ಅನುಮತಿ ನೀಡಿರುತ್ತದೆ ಎಂದು ತಿಳಿಸಿರುತ್ತಾರೆ.

ಮುಂದುವರೆದು, ಆಡಳಿತಾಧಿಕಾರಿಯವರು ಬ್ಯಾಂಕಿನ ಲೆಕ್ಕಪರಿಶೋಧನೆ, ಸಾಲ ವಸೂಲಾತಿ, ಅವ್ಯವಹಾರಗಳ ತನಿಖೆ, ಡಿಐಸಿಜಿಸಿ ಕ್ಲೇಮುಗಳ ನಿರ್ವಹಣೆ ಸೇರಿದಂತೆ ಬ್ಯಾಂಕಿನ ಸುಧಾರಣೆ ಮತ್ತು ಪುನ:ಶ್ಚೇತನಕ್ಕೆ ಕ್ರಮ ಕೈಗೊಳ್ಳುತ್ತಿದ್ದಾರೆ ಎಂದು ತಿಳಿಸುತ್ತಾ, ಭಾರತೀಯ ರಿಸರ್ವ್ ಬ್ಯಾಂಕ್ ದಿನಾಂಕ:10.04.2024ರ ಪತ್ರದಲ್ಲಿ ಆಡಳಿತಾಧಿಕಾರಿ ಅವಧಿಯನ್ನು ದಿನಾಂಕ:18.05.2024 ರಿಂದ 17.05.2025 ರವರೆಗೆ ವಿಸ್ತರಿಸಲು ಕೋರಿರುವುದರಿಂದ ಸಹಕಾರ ಸಂಘಗಳ ನಿಬಂಧಕರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಒ 54 ಸಿಆರ್‌ಸಿ 2023, ಬೆಂಗಳೂರು, ದಿನಾಂಕ:21.05.2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಕಲಂ 121 ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಶ್ರೀ ಗುರು ರಾಘವೇಂದ್ರ ಸಹಕಾರ ಬ್ಯಾಂಕ್ ನಿಯಮಿತ, ಬೆಂಗಳೂರು ಇದರ ಆಡಳಿತಾಧಿಕಾರಿ ಅವಧಿಯನ್ನು ದಿನಾಂಕ:18.05.2024 ರಿಂದ 17.05.2025 ರವರೆಗೆ ವಿಸ್ತರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

21/5/2024
(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3
ಸಹಕಾರ ಇಲಾಖೆ

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ ಕರ್ನಾಟಕ ರಾಜ್ಯ ಪತ್ರದಲ್ಲಿ ಕೂಡಲೇ ಪ್ರಕಟಿಸಿ, ಅದರ 50 ಪ್ರತಿಗಳನ್ನು ಒದಗಿಸಲು ಕೋರಿದೆ.

**ಪ್ರತಿಗಳು;**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸಹಕಾರ ಸಂಘಗಳ ನಿಬಂಧಕರು, ನಂ.1 ಆಲಿ ಆಸ್ಕರ್ ರಸ್ತೆ, ಬೆಂಗಳೂರು-560052.